ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ :   25-03-2021   ಪ್ರಶ್ನೆ ಸಂಖ್ಯೆ :   1844 (2186)

ಸದಸ್ಯರ ಹೆಸರು ಮತ್ತು ಕ್ಷೇತ್ರ :   ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ :   25-03-2021

ಉತ್ತರಿಸುವ ಸಚಿವರು:   ಮಾನ್ಯ ಮುಖ್ಯಮಂತ್ರಿಗಳು

ವಿಷಯ :   ಗುಪ್ತಚರ ಇಲಾಖೆಯ ಕಾರ್ಯಚಟುವಟಿಕೆಯ ಕುರಿತು

(ಅ) ರಾಜ್ಯದ ಗುಪ್ತಚರ ಇಲಾಖೆಯ ವ್ಯಾಪ್ತಿಗೆ ಒಳಪಡುವ ಚಟುವಟಿಕೆಗಳು ಯಾವುವು; ಒಳಪಡದೇ ಇರುವ ಚಟುವಟಿಕೆಗಳು ಯಾವುವು;

(ಆ) ಪೊಲೀಸ್ ಇಲಾಖೆ, ಗಣಿ ಇಲಾಖೆ, ಅಬಕಾರಿ, ವಾಣಿಜ್ಯ ತೆರಿಗೆ ಇಲಾಖೆಗಳಲ್ಲಿ ಕೋಟ್ಯಾಂತರ ರೂಪಾಯಿ ತೆರಿಗೆ ವಂಚನೆ ಸೇರಿದಂತೆ ಅಕ್ರಮ ಚಟುವಟಿಕೆಗಳು ನಡೆಯುತ್ತಿದ್ದರೂ ಗುಪ್ತಚರ ಇಲಾಖೆಗೆ ಮಾಹಿತಿ ದೊರಕದಿರಲು ಕಾರಣವೇನು; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು;

(ಇ) ಹಲವು ಬಾರಿ ಕಾನೂನುಬಹಿರ ಚಟುವಟಿಕೆಗಳು ಗುಪ್ತಚರ ಇಲಾಖೆಗೆ ಮಾಹಿತಿ ಸಿಗುವ ಪೂರ್ವದಲ್ಲೇ ಮಾಧ್ಯಮಗಳಲ್ಲಿ ಪ್ರಕಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಗುಪ್ತಚರ ಇಲಾಖೆಯನ್ನು ಬಲಪಡಿಸುವಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ?